# ನಿವೃತ್ತಿಮಾರ್ಗ



ಮನಸ್ಸಿನಲ್ಲಿ ನಿವೃತ್ತಿಯುಂಟಾಯಿತು ಎಂದರೆ, ವಿವೇಕ ಉದಯವಾಗುತ್ತದೆ. ವಿವೇಕ ಉದಯವಾಯಿತು ಎಂದರೆ, ತಾತ್ತ್ವಿಕ ಭಾವನೆ ಮನಸ್ಸಿನಲ್ಲಿ ಮೂಡುತ್ತದೆ. ಬಳಿಕ ಮನಸ್ಸು ಇಚ್ಛೆಪಡುತ್ತದೆ, 'ಶ್ರೀ ಕಾಳೀ ಸುರತರುವಿರುವೆಡೆಗೆ' ಹೋಗಲು. ಆ ಮರದ ಹತ್ತಿರಕ್ಕೆ ಹೋದರೆ, ಎಂದರೆ ಭಗವಂತನನ್ನು ಸಮೀಪಿಸಿದರೆ ಅನಾಯಾಸವಾಗಿ ಧರ್ಮ, ಅರ್ಥ, ಕಾಮ, ಮೋಕ್ಷ ಎಂಬ ನಾಲ್ಕು ಫಲಗಳು ದೊರೆಯುತ್ತವೆ. ಹೌದು, ಆತನ ಸಾಕ್ಷಾತ್ಕಾರವನ್ನು ಪಡೆದುಕೊಂಡ ಮೇಲೆ ಇಚ್ಛೆಯಿದ್ದರೆ ಸಂಸಾರಿಗಳಿಗೆ ಬೇಕಾದ ಧರ್ಮ, ಅರ್ಥ, ಕಾಮಗಳನ್ನು ಆತನಿಂದ ಪಡೆದುಕೊಳ್ಳಬಹುದು.

ಭಗವಂತನ ಸಾಕ್ಷಾತ್ಕಾರ ದೊರೆಯದವರೆಗೆ 'ನೇತಿ, ನೇತಿ' ಮಾರ್ಗವನ್ನು ಅನುಸರಿಸಿ ಈ ಜಗತ್ತನ್ನು ತ್ಯಜಿಸಬೇಕು. ಆದರೆ ಯಾರು ಭಗವಂತನ ಸಾಕ್ಷಾತ್ಕಾರವನ್ನು ಪಡೆದುಕೊಂಡಿದ್ದಾರೊ ಅವರಿಗೆ ಗೊತ್ತಿದೆ ಆತನೇ ಎಲ್ಲವೂ ಆಗಿದ್ದಾನೆ ಎಂಬುದು. ಆಗ ಬೋಧೆಯಾಗುತ್ತದೆ. 'ಈಶ್ವರ-ಮಾಯಾ-ಜೀವ-ಜಗತ್' ಎಂಬುದಾಗಿ. ಜೀವಜಗತ್ತೆಲ್ಲವೂ ಕೇವಲ ಆತನೇ.

ಭಗವಂತನೊಬ್ಬನೇ ಸತ್, ಉಳಿದುದೆಲ್ಲಾ ಅಸತ್ ಎಂಬ ವಿಚಾರ. ಸತ್ ಎಂದರೆ ನಿತ್ಯವಾದದ್ದು, ಅಸತ್ ಎಂದರೆ ಅನಿತ್ಯವಾದದ್ದು. ಯಾರು ವಿವೇಕವನ್ನು ಗಳಿಸಿಕೊಂಡಿದ್ದಾರೊ ಅವರಿಗೆ ಗೊತ್ತಿದೆ ಭಗವಂತನೊಬ್ಬನೇ ವಸ್ತು ಉಳಿದುದೆಲ್ಲಾ ಅವಸ್ತು ಎಂದು. ವಿವೇಕ ಉದಯವಾಯಿತು ಎಂದರೆ, ಭಗವಂತನನ್ನು ಅರಿಯಬೇಕು ಎಂಬ ಇಚ್ಛೆಯಾಗುತ್ತದೆ. ಅಸತ್ ವಸ್ತುಗಳನ್ನು ಎಂದರೆ ದೇಹಸುಖ, ಲೋಕ ಮಾನ್ಯತೆ, ಹಣ ಇವೇ ಮೊದಲಾದುವುಗಳನ್ನು ಪ್ರೀತಿಸಿದರೆ, ಸತ್ಸ್ವರೂಪನಾದ ಭಗವಂತನನ್ನು ಅರಿಯಲು ಇಚ್ಛೆಯುಂಟಾಗುವುದಿಲ್ಲ. ಸದ್ವಿಚಾರ ಬಂದ ಮೇಲೇನೆ ಭಗವಂತನನ್ನು ಅರಿಯಲು ಇಚ್ಛೆಯುಂಟಾಗುತ್ತದೆ.

ಯಾರ ಮನಸ್ಸು, ಪ್ರಾಣ, ಅಂತರಾತ್ಮ ಭಗವದ್ಗತವಾಗಿದೆಯೊ ಆತನೇ ಸಾಧು. ಯಾರು ಕಾಮಕಾಂಚನ ತ್ಯಾಗಿಯೊ ಆತನೇ ಸಾಧು. ಯಾರು ಸಾಧುವೋ ಆತ ಹೆಂಗಸರನ್ನು ಎಂದಿಗೂ ಐಹಿಕ ದೃಷ್ಟಿಯಿಂದ ನೋಡುವುದಿಲ್ಲ. ಸರ್ವದಾ ಅವರಿಂದ ದೂರದಲ್ಲೆ ಇರುತ್ತಾನೆ. ಒಂದು ಪಕ್ಷ ಅವರನ್ನು ಸಮೀಪಿಸಬೇಕಾಗಿ ಬಂದರೆ ಅವರನ್ನು ಮಾತೃದೃಷ್ಟಿಯಿಂದ ನೋಡುತ್ತ ಅವರನ್ನು ಪೂಜೆಮಾಡುತ್ತಾನೆ. ಸಾಧು ಯಾವಾಗಲೂ ಭಗವಚ್ಚಿಂತನೆಯನ್ನೇ ಮಾಡುತ್ತಾನೆ. ಭಗವತ್ಸಂಬಂಧವಾಗಿ ಹೊರತು ಬೇರೆ ಯಾವ ಮಾತನ್ನೂ ಆಡುವುದಿಲ್ಲ. ಸರ್ವಭೂತಗಳಲ್ಲಿಯೂ ಭಗವಂತನೇ ಇದ್ದಾನೆ ಎಂಬುದನ್ನು ಅರಿತು ಅವರ ಸೇವೆಯನ್ನು ಮಾಡುತ್ತಾನೆ. ಸಾಮಾನ್ಯವಾಗಿ ಇವು ಸಾಧುವಿನ ಲಕ್ಷಣಗಳು.

ಭಗವಂತನನ್ನು ಇಂದ್ರಿಯಗಳ ಮೂಲಕ ಅಥವಾ ಈ ಮನಸ್ಸಿನ ಮೂಲಕ ಅರಿಯಲಾಗುವುದಿಲ್ಲ. ಆದರೆ ಯಾವ ಮನಸ್ಸಿನಲ್ಲಿ ವಿಷಯರಸ ಎಂಬುದು ಇಲ್ಲವೇ ಇಲ್ಲವೊ ಅಂಥ ಶುದ್ಧ ಮನಸ್ಸಿನಿಂದ ಆತನನ್ನು ಅರಿಯಲು ಸಾಧ್ಯ.

ಸರ್ವದಾ ಕರ್ಮಗಳನ್ನು ಮಾಡಿಕೊಂಡು ಹೋಗುತ್ತಲೇ ಇರಬೇಕಾದ ಆವಶ್ಯಕತೆಯೇನಿರುವುದಿಲ್ಲ. ಕಾಯಿ ಕಚ್ಚಿದ ಮೇಲೆ ಹೂವು ತಾನಾಗಿಯೆ ಉದುರಿ ಹೋಗುವ ಹಾಗೆ, ಭಗವದ್ದರ್ಶನವಾದನಂತರ ಕರ್ಮಗಳು ತಾವಾಗಿಯೇ ನಿಂತು ಹೋಗುತ್ತವೆ.

ಯಾರಿಗೆ ಭಗವಂತನ ಸಾಕ್ಷಾತ್ಕಾರ ದೊರೆತಿದೆಯೋ ಆತನಿಗೆ ಸಂಧ್ಯಾವಂದನಾದಿ ಕರ್ಮಗಳು ಇರುವುದಿಲ್ಲ. ಆತನ ವಿಷಯದಲ್ಲಿ ಸಂಧ್ಯಾವಂದನೆ ಗಾಯತ್ರಿಯಲ್ಲಿ ಲೀನವಾಗುತ್ತದೆ. ಅದು ಹಾಗಾದಾಗ ಗಾಯತ್ರಿಯನ್ನು ಜಪಿಸಿದರೇ ಬೇಕಾದಷ್ಟು. ಬಳಿಕ ಗಾಯತ್ರಿ ಓಂಕಾರದಲ್ಲಿ ಲಯವಾಗುತ್ತದೆ. ಅದಾದನಂತರ ಗಾಯತ್ರಿಯನ್ನು ಜಪಿಸಬೇಕಾದ ಆವಶ್ಯಕತೆಯೇನಿರುವುದಿಲ್ಲ; ಆಗ ಕೇವಲ ''ಓಂ'' ಎಂದು ಜಪಿಸುತ್ತಿದ್ದರೇ ಸಾಕು. ಸಂಧ್ಯಾವಂದನಾದಿ ಕರ್ಮಗಳು ಎಲ್ಲಿಯವರೆಗೆ? ಹರಿನಾಮ ಅಥವಾ ರಾಮನಾಮೋಚ್ಚಾರಣೆಯಿಂದ ಪುಳಕವುಂಟಾಗುವುದಿಲ್ಲವೋ, ಪ್ರೇಮಾಶ್ರು ಸುರಿಯುವುದಿಲ್ಲವೊ ಅಲ್ಲಿಯವರೆಗೆ.

ತೀವ್ರ ವೈರಾಗ್ಯ ಉಂಟಾದರೆ, ಭಗವಂತನ ಸಾಕ್ಷಾತ್ಕಾರವನ್ನು ಪಡೆದುಕೊಳ್ಳಬಹುದು. ಯಾರಿಗೆ ತೀವ್ರ ವೈರಾಗ್ಯ ಉಂಟಾಗಿದೆಯೊ, ಅವರಿಗೆ ಈ ಸಂಸಾರ ದಾವಾನಲದ ಹಾಗೆ ಕಾಣುತ್ತದೆ. ಹೆಂಡತಿ ಮಕ್ಕಳು ಅವರ ಕಣ್ಣಿಗೆ ಆಳವಾದ ಬಾವಿಯ ಹಾಗೆ ಕಾಣುತ್ತಾರೆ. ಅಂಥ ವೈರಾಗ್ಯ ನಿಜವಾಗಿ ಉಂಟಾದುದೇ ಆದರೆ, ಮನೆಯನ್ನು ತ್ಯಜಿಸಿ ಹೋಗಲೇಬೇಕಾಗುತ್ತದೆ. ಸಂಸಾರದಲ್ಲಿ ಕೇವಲ ಅನಾಸಕ್ತರಾಗಿರುವುದು ಅವರಿಗೆ ತೃಪ್ತಿಯನ್ನು ತರದು.

ಯಾರಿಗೆ ಪರಮಹಂಸ ಅಂತ ಹೆಸರು? ಯಾರು ಹಂಸದ ಹಾಗೆ, ಹಾಲು ನೀರು ಒಟ್ಟಿಗೆ ಬೆರೆತಿದ್ದರೂ, ಹಾಲನ್ನು ಮಾತ್ರ ಸ್ವೀಕರಿಸಿ ನೀರನ್ನು ತ್ಯಜಿಸಿಬಿಡುವನೊ; ಇರುವೆಯ ಹಾಗೆ, ಸಕ್ಕರೆ ಮರಳು ಎರಡೂ ಬೆರೆತಿದ್ದರೂ, ಸಕ್ಕರೆಯನ್ನು ಬೇರ್ಪಡಿಸಿಕೊಂಡು ಮರಳನ್ನು ಬಿಟ್ಟು ಬಿಡುವನೊ ಆತನೇ ಪರಮಹಂಸ.

**ಶ್ರೀರಾಮಕೃಷ್ಣ ವಚನವೇದದಿಂದ**